**ದಿನಾಂಕಃ 20.06.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು : ಪ್ರತಿವಾದಿ ಪರ ಶ್ರೀ ಎ.ಎಂ.ಎಂ. ವಕೀಲರಿಂದಃ**

1) ನಾನು 10ನೇ ತರಗತಿಯವರೆಗು ವಿದ್ಯಾಭ್ಯಾಸ ಮಾಡಿರುತ್ತೇನೆ. ವಾದ ಪತ್ರದಲ್ಲಿ ತಿಳಿಸಿರುವ ಸಂಗತಿಗಳು ಸತ್ಯವಾಗಿರುತ್ತವೆ. ದಾವಾ ಸ್ವತ್ತು ನನ್ನ ತಾತ ಮರಿಹುಚ್ಚಯ್ಯರವರಿಂದ ಬಂದಿರುತ್ತದೆ ಎಂದರೆ ಸರಿ. ನನ್ನ ತಾತನಿಗೆ ಒಟ್ಟು ನಾಲ್ಕು ಜನ ಗಂಡು ಮಕ್ಕಳು ಮತ್ತು ಮೂರು ಜನ ಹೆಣ್ಣು ಮಕ್ಕಳು. ಆ 7 ಜನರ ಪೈಕಿ ನನ್ನ ತಂದೆ ರಾಮಸಂಜೀವಯ್ಯ ರವರು ಮೊದಲನೇ ಮಗ ಎಂದರೆ ಸರಿ. ನನ್ನ ತಂದೆಗೆ ದಾವಾ ಸ್ವತ್ತಿನ ಖಾತೆ ಯಾವಾಗ ದಾಖಲಾಗಿತ್ತು ಎಂದು ನನಗೆ ಗೊತ್ತಿಲ್ಲ. ನನ್ನ ತಂದೆ 2000 ನೇ ಸಾಲಿನಲ್ಲಿ ಮೃತಪಟ್ಟಿರುತ್ತಾರೆ. ನನ್ನ ತಂದೆ ಮೃತಪಟ್ಟ ನಂತರ ದಾವಾ ಸ್ವತ್ತಿನ ಖಾತೆ ನನ್ನ ತಾಯಿಯ ಹೆಸರಿಗೆ ದಾಖಲಾಗಿತ್ತು. ಆ ರೀತಿ ಖಾತೆ ನನ್ನ ತಾಯಿಯ ಹೆಸರಿಗೆ ಯಾವ ವರ್ಷದಲ್ಲಿ ಆಗಿತ್ತು ಎಂದು ನನಗೆ ಗೊತ್ತಿಲ್ಲ. ನನ್ನ ಹೆಸರಿಗೆ ನನ್ನ ತಾಯಿಯಿಂದ ಒಂದು ಕರಾರು ಪತ್ರ ಮಾಡಿಕೊಂಡು ಅದರ ಮೇರೆಗೆ ದಾವಾ ಸ್ವತ್ತಿನ ಖಾತೆಯನ್ನು ನನ್ನ ಹೆಸರಿಗೆ ಮಾಡಿಸಿಕೊಂಡಿರುತ್ತೇನೆ. ಸದರಿ ಕರಾರು ಪತ್ರವನ್ನು ನೋಂದಣಿ ಮಾಡಿಸಿರುತ್ತೇನೆ. ಆ ಕರಾರು ಪತ್ರವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ನಾನು ಅಂತಹ ಯಾವುದೇ ಕರಾರು ಪತ್ರವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ.

2) ಪ್ರತಿವಾದಿಗಳು ನನ್ನ ಚಿಕ್ಕಪ್ಪಂದಿರು ಎಂದರೆ ಸರಿ. ನನ್ನ ತಂದೆ ಮತ್ತು ಆತನ ಸಹೋದರರಾದ ಪ್ರತಿವಾದಿಗಳ ನಡುವೆ ಕುಟುಂಬದ ಸ್ವತ್ತುಗಳಲ್ಲಿ ವಿಭಾಗ ಆಗಿರುವುದಿಲ್ಲ ಎಂದರೆ ಸರಿ. ನಮ್ಮ ತಂದೆಗೆ ಕುಟುಂಬದ ಆಸ್ತಿಗಳಲ್ಲಿ ನಿರ್ದಿಷ್ಟವಾಗಿ ಇಂತಹದೇ ಭಾಗ ಎಂದು ಹೇಳಿ ಯಾವುದೇ ದಾಖಲೆಗಳು ಆಗಿರುವುದಿಲ್ಲ. ಸಾಕ್ಷಿಯು ಪುನಃ ಸದರಿ ಪ್ರಶ್ನೆಗೆ ದಾಖಲೆ ಆಗಿರುವುದಾಗಿ ನುಡಿಯುತ್ತಾರೆ. ಆ ರೀತಿ ವಿಭಾಗ ಮಾಡಿಕೊಂಡಿರುತ್ತಾರೆ ಎಂದು ತೋರಿಸಲು ದಾಖಲೆಗಳನ್ನುಈ ಪ್ರಕರಣದಲ್ಲಿ ಹಾಜರುಪಡಿಸಿರುತ್ತೇನೆ. ನಾನು ಅಂತಹ ಯಾವುದೇ ದಾಖಲೆಯನ್ನು ಈ ಪ್ರಕರಣದಲ್ಲಿ ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಗಳು ಕುಟುಬಂದ ಆಸ್ತಿಗಳಲ್ಲಿ ವಿಭಾಗ ಕೋರಿ ಹಿರಿಯ ಸಿವಿಲ್ ನ್ಯಾಯಾಲಯ, ಚನ್ನಪಟ್ಟಣದಲ್ಲಿ ಅಸಲು ದಾವಾ ಸಂಖ್ಯೆ 153/2023 ರಂತೆ ಪ್ರಕರಣ ದಾಖಲಿಸಿರುತ್ತಾರೆ ಎಂದರೆ ಸರಿಯಲ್ಲ. ನಾನು ಸದರಿ ಅಸಲು ದಾವಾ ಸಂಖ್ಯೆ 153/2023 ರಲ್ಲಿ ಈ ಪ್ರಕರಣದಲ್ಲಿನ ನನ್ನ ವಕೀಲರ ಮುಖಾಂತರ ಹಾಜರಾಗಿರುತ್ತೇನೆ ಎಂದರೆ

ಸರಿಯಲ್ಲ. ಸದರಿ ಪ್ರಕರಣದಲ್ಲಿ ನಾನು ಇದುವರೆವಿಗೂ ಲಿಖಿತ ತಕರಾರನ್ನು ಸಲ್ಲಿಸಿರುವುದಿಲ್ಲ ಎಂದರೆ ಸರಿಯಲ್ಲ.

3) ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ಪ್ರತಿವಾದಿಗಳು ನಮಗೆ ತೊಂದರೆ ಕೊಟ್ಟ ನಂತರ ನಾನು ಅವರ ವಿರುದ್ಧ ಪೋಲಿಸ್ ಠಾಣೆಗೆ ದೂರು ನೀಡಿದ್ದು ಅದರ ಮೇರೆಗೆ ಪೋಲಿಸರು ಎನ್.ಸಿ.ಆರ್. ಅನ್ನು ದಾಖಲಿಸಿಕೊಂಡು ಹಿಂಬರಹವನ್ನು ನೀಡಿರುತ್ತಾರೆ ಎಂದು ತೋರಿಸಲು ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ. ನಾನು ಅಂತಹ ಯಾವುದೆ ದಾಖಲೆಗಳನ್ನು ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಗಳು ನಮಗೆ ಯಾವುದೇ ರೀತಿ ತೊಂದರೆ ಮಾಡದೇ ಇದ್ದರೂ ಸಹ ನಾನು ಅವರ ವಿರುದ್ಧ ಅನಾವಶ್ಯಕವಾಗಿ ಅವರಿಗೆ ತೊಂದರೆ ಕೊಡಲು ಈ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ದಾವಾ ಸ್ವತ್ತು ನಮ್ಮ ಕುಟುಂಬದ ಪಿತ್ರಾರ್ಜಿತ ಸ್ವತ್ತಾಗಿದ್ದು ಅದರಲ್ಲಿ ಇದುವರೆವಿಗೂ ಯಾವುದೇ ರೀತಿ ವಿಭಾಗ ಆಗಿರದ ಕಾರಣ ಪ್ರತಿವಾದಿಗಳ ವಿರುದ್ಧ ಹೂಡಿರುವ ಈ ದಾವೆ ಊರ್ಜಿತ ಆಗಿರುವುದಿಲ್ಲ ಎಂದರೆ ಸರಿಯಲ್ಲ. ವಾದ ಪತ್ರ ಮತ್ತು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿ ತಿಳಿಸಿರುವ ಸಂಗತಿಗಳು ಸುಳ್ಳಿನಿಂದ ಕೂಡಿದೆ ಎಂದರೆ ಸರಿಯಲ್ಲ.

**ಮರು ವಿಚಾರಣೆ : ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕೀಕರಣ ಮಾಡಲಾಯಿತು).

ಓ. ಹೆ. ಕೇ. ಸರಿ ಇದೆ.

**ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ. ದಂ.ಗಳ**
**ನ್ಯಾಯಾಲಯ, ಚನ್ನಪಟ್ಟಣ.**